ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಈ 4 ಕಾಮಗಾರಿಗಳಿಗೆ ಗುತ್ತಿಗೆದಾರರನ್ನು ನಿಗದಿಪಡಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದೆ. ಈ ಕ್ಷೇತ್ರಕ್ಕೆ ಜೂನ್ 1996 ಅಂತ್ಯಕ್ಕೆ 1.30 ಲಕ್ಷ ರೂ.ಗಳನ್ನು ಖರ್ಚು ಮಾಡಲಾಗಿದೆ. ಈ ಕಾರ್ಯಕ್ರಮದ ಅಡಿಯಲ್ಲಿ ಜೂನ್ 96ರ ಕೊನೆಯವರೆಗೆ 596.54 ಲಕ್ಷ ರೂ.ಗಳ ಆರ್ಥಿಕ ಪ್ರಗತಿಯಾಗಿದೆ. 888.00 ಲಕ್ಷ ರೂ.ಗಳ ಮುಂಗಡವನ್ನು ಡಾಂಬರು ಖರೀದಿಗಾಗಿ ಜೂನ್ 96ರ ವರೆಗೆ ವೆಚ್ಚ ಮಾಡಲಾಗಿದೆ.

ವಿಷಯ:- ಕುಂದಾಪುರ ತಾಲ್ಲೂಕಿನ ಮಡಾಮಕ್ಕಿ ಪಂಚಾಯತಿಯ ಮಾಂಡಿಮೂರುಕೈನ ಪಶುಚಿಕಿತ್ಸಾಲಯದಲ್ಲಿ ಸಿಬ್ಬಂದಿ ಕೊರತೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 616 (1376)

ಶ್ರೀ ಕೆ.ಪ್ರತಾಪಚಂದ್ರ (ಕುಂದಾಪುರ):- ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಮಡಾಮಕ್ಕಿ ಪಂಚಾಯತ್‌ನ ಮಾಂಡಿಮೂರುಕೈನಲ್ಲಿ ಪಶುಚಿಕಿತ್ಸಾಲಯದಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ಸರಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಕೊರತೆ ತುಂಬಲು ಸರಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):-

ಅ) ಬಂದಿದೆ.

ಆ) ಸದರಿ ಕೇಂದ್ರವು 1994ರಲ್ಲಿ ಮಂಜೂರಾಗಿದ್ದು ಇದರಲ್ಲಿನ ಒಂದು ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಒಂದು ಪಶುವೈದ್ಯ ಸಹಾಯಕರು, ಒಂದು 'ಡಿ' ದರ್ಜೆ ನೌಕರರ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಮುಖೇನ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ:- ಉಡುಪಿ ತಾಲ್ಲೂಕಿನಲ್ಲಿ ಅಬಕಾರಿ ಇಲಾಖೆ ನಡೆಸಿದ ಧಾಳಿಗಳ ವಿವರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 617 (1370)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ):- ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಒಂದು ವರ್ಷದಿಂದೀಚೆಗೆ ಉಡುಪಿ ತಾಲ್ಲೂಕಿನಲ್ಲಿ ಅಬಕಾರಿ ಇಲಾಖೆಯವರು ಧಾಳಿ ನಡೆಸಿದ ಪ್ರಕರಣಗಳೆಷ್ಟು (ತಾರೀಖುವಾರು ವಿವರ ನೀಡುವುದು).